ಪ್ರಕಟಣೆ

ಅಧ್ಯಕ್ಷರು : ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯ ವಿಧಾನ ಹಾಗೂ ನಡವಳಿಕೆಯ ನಿಯಮಗಳ ನಿಯಮ 114 ರ ಮೇರೆಗೆ ವಿಧಾನ ಪರಿಷತ್ತಿನಲ್ಲಿ ದಿನಾಂಕ 30ನೇ ಆಗಸ್ಟ್, 1994 ರಂದು ಕರ್ನಾಟಕ ರೇಷ್ಮೆ ಹುಳು ತಳಿ, ರೇಷ್ಮೆ ಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು, ಹಂಚಿಕೆ ಮತ್ತು ಮಾರಾಟದ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 1994ನ್ನು ಯಾವುದೇ ತಿದ್ದುಪಡಿಯಿಲ್ಲದೆ ಅನುಮೋದಿಸಿತೆಂದು ಈ ಮೂಲಕ ತಿಳಿಸುತ್ತಿದ್ದೇನೆ.

ವರದಿಯನ್ನೊಪ್ಪಿಸುವುದು

ಶ್ರೀ ಅಂಜನಮೂರ್ತಿ : ವಿಧಾನ ಸಭೆಯ ಉಪಾಧ್ಯಕ್ಷರು (ಅಧ್ಯಕ್ಷರು, ಅರ್ಜಿಗಳ ಸಮಿತಿ) ಮಾನ್ಯ ಅಧ್ಯಕ್ಷರೆ, ವಿಧಾನ ಸಭೆಯ ಅರ್ಜಿಗಳ ಸಮಿತಿಯ 4ನೇ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು

ಶಾಸನ ರಚನಾ ಕಾರ್ಯಕಲಾಪ.

1992ರ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ವಿಧೇಯಕ

ಪರ್ಯಾಲೋಚನ ಪ್ರಸ್ತಾವ

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, 1992ರ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವ 'ಏನೆಂದರೆ' 1992ರ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 41 ರವರೆಗೆ :

ಅಧ್ಯಕ್ಷರು : ಖಂಡ 2 ರಿಂದ 41ರವರೆಗೆ ಎರಡೂ ಸೇರಿದಂತೆ ಮತ್ತು ಮೊದಲನೆ ಹಾಗೂ ಎರಡನೇ ಅನುಸೂಚಿಗಳು. ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 41 ರವರೆಗೆ ಎರಡೂ ಸೇರಿದಂತೆ ಮತ್ತು ಮೊದಲನೆ ಹಾಗೂ ಎರಡನೇ ಅನುಸೂಚಿಗಳು. ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ :

ಅಧ್ಯಕ್ಷರು : ಪ್ರಸ್ತಾವ 'ಏನೆಂದರೆ' ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕ ಭಾಗವಾಗಿರುತ್ತದೆ."